ಇ) ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳು ಹಾಗೂ ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ನಾಯರ್ ಜಾತಿಯನ್ನು ಸೇರಿಸಿರುವುದಿಲ್ಲ. ಆದುದರಿಂದ ನಾಯರ್‌ಗಳಿಗೆ ಜಾತಿ ಪ್ರಮಾಣ ಪತ್ರ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಇಂತಹ ಬೇಡಿಕೆಗಳು ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ.

...

380 (71) : ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕುದುರೆಮುಖ ರಾಷ್ಟ್ರೀಯ ಉದ್ಯಾನ ಪ್ರದೇಶ ವ್ಯಾಪ್ತಿಗೆ ಬರುವ ಏಳನೀರು, ಗುತ್ತಡ್ಕ ನಾವೂರು ಸುಲ್ಕೇರಿ, ಮೊಗ್ರು ಕುತ್ಲೂರು, ಸವಣಾಲು, ಮಳ್ಳೋಡಿ, ಈದು, ನಾರವಿ, ಹೊಸಮಾರು, ಮಾಳ ಮುಂತಾದ ಊರುಗಳಲ್ಲಿ ಅರಣ್ಯ ಭೂಮಿಯನ್ನು ಒತ್ತುವರಿ ಮಾಡಿಕೊಂಡು ಸರ್ಕಾರದಿಂದ ಸಕ್ರಮಗೊಳಿಸಿಕೊಂಡ ರೈತರ ಸಂಖ್ಯೆ ಎಷ್ಟು;

ಆ) ರೈತರುಗಳಿಗೆ ಒತ್ತುವರಿಯನ್ನು ಸಕ್ರಮಗೊಳಿಸಿ ಸರ್ವೆ ಪಕ್ಕಾಮಾಡಿ ನಂಬರ್ ಇತ್ಯಾದಿಗಳನ್ನು ನೀಡಿದ್ದರೂ ಅರಣ್ಯ ಇಲಾಖೆಯವರು ತೆರವುಗೊಳಿಸಲು ಈಗ ಒತ್ತಾಯಿಸುತ್ತಿರುವುದು ನಿಜವೆ :

ಇ) ಹಾಗಿದ್ದಲ್ಲಿ ತಲೆ–ತಲಾಂತರಗಳಿಂದ ಅಲ್ಲಿ ಮೂಲನಿವಾಸಿ ಕೃಷಿಕರಾಗಿ ಜೀವನ ನಡೆಸುತ್ತಿದ್ದ ಇವರುಗಳನ್ನು ತೆರವುಗೊಳಿಸುವುದು ಅನ್ಯಾಯವಲ್ಲವೆ;

ಈ) ಈಗ ಅರಣ್ಯ ಇಲಾಖೆಯವರು ರೈತರ ಬೆಳೆಗಳನ್ನು ನಾಶಪಡಿಸುತ್ತಿರುವುದು ಹಾಗೂ ಶಾಲಾ ಮಕ್ಕಳು ನಡೆದಾಡುವ ಮರದ ಕಿರು ಸೇತುವೆಗಳನ್ನು ಕೂಡ ತೆಗೆದು ಹಾಕಿರುವುದಂತಹ ಕ್ರಮದಿಂದಾಗಿ ಜನರು ಸಂಕಷ್ಟಕ್ಕೆ ಒಳಗಾಗಿರುವುದನ್ನು ಸರ್ಕಾರ ಗಮನಿಸಿದೆಯೇ ಇಲಾಖೆಯವರು ರೈತರನ್ನು ತೆರವುಗೊಳಿಸಲು ಕೈಗೊಂಡ ಈ ಕ್ರಮದ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಯವರು)

ಅ) ಯಾವುದೇ ಪ್ರಕರಣಗಳು ಇರುವುದಿಲ್ಲ.

ಆ) ಇಲ್ಲ.

ಇ) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಆದೇಶದನ್ವಯ ಅತಿಕ್ರಮಣಗಳನ್ನು ತೆರವುಗೊಳಿಸಲಾಗುತ್ತಿದೆ.

ಈ) ಇಲ್ಲ.

...

381 (527) : ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಭಾಲ್ಕಿ ಕ್ಷೇತ್ರದಲ್ಲಿ ಸರ್ಕಾರಿ ಮಾಧ್ಯಮಿಕ ಶಾಲೆಗಳ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;